ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಗ್ರಾಮ ಪಂಚಾಯಿತಿಗಳಲ್ಲಿ ಘನತ್ಯಾಜ್ಯ ವಿಲೇವಾರಿ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

864 (1111) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಗ್ರಾಮಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿ ಘನತ್ಯಾಜ್ಯ ವಿಲೇವಾರಿ ಮಾಡಲು ಪ್ರತಿ ಗ್ರಾಮ ಪಂಚಾಯಿತಿಗಳಿಗೆ 20 ಲಕ್ಷ ರೂ ಅನುದಾನ ಒದಗಿಸಲು ನಿರ್ಧರಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳಿಗೆ; ಬೆಳಗಾವಿ ಜಿಲ್ಲೆಯ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಘನತ್ಯಾಜ್ಯ ವಿಲೇವಾರಿಗೆ ಅನುದಾನ ಒದಗಿಸಲು ಆಯ್ಕೆ ಮಾಡಿಕೊಳ್ಳಲಾಗಿದೆ; ಅವು ಯಾವುವು; (ವಿವರ ನೀಡುವುದು)

(ಇ) ಈಗಾಗಲೇ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಘನತ್ಯಾಜ್ಯ ವಿಲೇವಾರಿಗೆ ಅನುದಾನ ಒದಗಿಸಲಾಗಿದೆ; ಅವು ಯಾವುವು; ಯೋಜನೆಯ ಅನುಷ್ಠಾನವು ಯಾವ ಹಂತದಲ್ಲಿದೆ; ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಸರ್ಕಾರವು ಮುಂದಿನ ಆರ್ಥಿಕ ವರ್ಷದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಇನ್ನೂ ಎಷ್ಟು ಗ್ರಾಮ ಪಂಚಾಯಿತಿಯನ್ನು ಸದರಿ ಯೋಜನೆಯಡಿ ತರಲು ನಿರ್ಧರಿಸಲಾಗಿದೆ; (ವಿವರ ನೀಡುವುದು)

(ಉ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಸದರಿ ಯೋಜನೆಗೆ ಸರ್ಕಾರವು ಎಷ್ಟು ಅನುದಾನವನ್ನು ಮೀಸಲಿರಿಸಿದೆ ? (ವಿವರ ನೀಡುವುದು)